# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 2122* |
| ಸದಸ್ಯರ ಹೆಸರು | ಶ್ರೀಮತಿ ಹೇಮಲತಾ ನಾಯಕ |
| ಉತ್ತರಿಸುವ ದಿನಾಂಕ | 25.03.2026 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2025-26ನೇ ಸಾಲಿನಲ್ಲಿ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನಕ್ಕೆ ಲಭಿಸಿದ ಒಟ್ಟು ಆದಾಯ ಎಷ್ಟು;</td><td>ಕೊಪ್ಪಳ ಜಿಲ್ಲೆ ಕೊಪ್ಪಳ ತಾಲ್ಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನಕ್ಕೆ 2025-26ನೇ ಸಾಲಿನಲ್ಲಿ (ಏಪ್ರಿಲ್-2025 ರಿಂದ ಫೆಬ್ರುವರಿ-2026 ರವರೆಗೆ) ರೂ.18,03,73,774/- ಗಳ ಆದಾಯ ಬಂದಿರುತ್ತದೆ.</td></tr>
<tr><td>ಆ)</td><td>ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಸಮಗ್ರ ಅಭಿವೃದ್ಧಿಗಾಗಿ ಎಷ್ಟು ಮೊತ್ತದ ಕ್ರಿಯಾ ಯೋಜನೆ(Action Plan) ಹಾಗೂ ಮಾಸ್ಟರ್ ಪ್ಲ್ಯಾನ್ ರೂಪಿಸಲಾಗಿದೆ; ಯೋಜನೆಯ ಅಂದಾಜು ವೆಚ್ಚ ಎಷ್ಟು;</td><td>ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರಕ್ಕೆ ಲಕ್ಷಾಂತರ ಜನ ಭಕ್ತಾಧಿಗಳು ದೇವಿಯ ದರ್ಶನಕ್ಕೆ ಆಗಮಿಸುತ್ತಿದ್ದು, ಅಷ್ಟು ಭಕ್ತಾಧಿಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿರಲಿಲ್ಲ.<br><br>ಶ್ರೀ ಹುಲಿಗೆಮ್ಮ ಕ್ಷೇತ್ರದಲ್ಲಿ ಭಕ್ತಾಧಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಸಮಗ್ರ ಅಭಿವೃದ್ಧಿಗಾಗಿ ಪ್ರಾಧಿಕಾರವನ್ನು ರಚಿಸಲಾಗಿರುತ್ತದೆ.<br><br>ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಸಮಗ್ರ ಅಭಿವೃದ್ಧಿಗಾಗಿ ಮಹಾನಕ್ಷೆಯನ್ನು (Master Plan) ಅನ್ನು ಸಿದ್ಧಪಡಿಸಿದ್ದು, ದಿನಾಂಕ.06.05.2025 ರಂದು ಜರುಗಿದ ದೇವಾಲಯದ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಅನುಮೋದಿಸಲಾಗಿರುತ್ತದೆ.<br><br>ಪ್ರಥಮ ಹಂತವಾಗಿ ಈ ಕೆಳಕಂಡ ಮೂರು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ:-<br><br>
<table>
<tr><th>ಕ್ರ.ಸಂ</th><th>ಕಾಮಗಾರಿಯ ವಿವರ</th><th>ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>1</td><td>ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಹಾಲಿ ಇರುವ ಕಟ್ಟಡವನ್ನು ತೆರವುಗೊಳಿಸಿ ಹೊಸದಾಗಿ ಕಲ್ಲಿನಿಂದ ದೇವಸ್ಥಾನ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿ</td><td>999.50</td></tr>
<tr><td>2</td><td>ಅಮ್ಮ ನಿಲಯ ವಸತಿ ಸಂಕೀರ್ಣ 2 & 3 ನೇ ಮಹಡಿ ನಿರ್ಮಾಣ ಕಾಮಗಾರಿ</td><td>985.00</td></tr>
<tr><td>3</td><td>ಮಹಾನಕ್ಷೆಯಲ್ಲಿ ಸೂಚಿಸಿರುವಂತೆ ಭಕ್ತಾದಿಗಳ ಅನುಕೂಲಕ್ಕಾಗಿ ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಇರುವಂತೆ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣ</td><td>340.00</td></tr>
<tr><td></td><td>ಒಟ್ಟು</td><td>2324.50</td></tr>
</table></td></tr>
</table>

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | ದೇವಾಲಯದ ಹಾಲಿ ಇರುವ ಕಟ್ಟಡವನ್ನು ತೆರವುಗೊಳಿಸಿ ದೇವಸ್ಥಾನವನ್ನು ರೂ.999.50 ಲಕ್ಷಗಳ ವೆಚ್ಚದಲ್ಲಿ ನೂತನವಾಗಿ ನಿರ್ಮಾಣ ಮಾಡುವ ಕಾಮಗಾರಿಗೆ ಸರ್ಕಾರದ ಆದೇಶ ದಿನಾಂಕ:03.03.2025ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಪ್ರಥಮ ಕಂತಿನ ಮೊತ್ತ ರೂ.250.00 ಲಕ್ಷಗಳನ್ನು ಲೋಕೋಪಯೋಗಿ ಇಲಾಖೆಗೆ ಠೇವಣಿ ಮಾಡಿದ್ದು, ಕಾಮಗಾರಿಯನ್ನು ಪ್ರಾರಂಭಿಸಲು ಕಾರ್ಯಾದೇಶ ನೀಡಲಾಗಿದ್ದು, ಕಾಮಗಾರಿಯು ಪ್ರಾರಂಭವಾಗಿರುತ್ತದೆ.<br><br>ಅಮ್ಮ ನಿಲಯ ವಸತಿ ಸಂಕೀರ್ಣ 2 & 3ರ ಕಟ್ಟಡದ ಮೇಲೆ 2ನೇ ಮತ್ತು 3ನೇ ಮಹಡಿಯಲ್ಲಿ ತಲಾ 30 ಕೊಠಡಿಗಳಂತೆ ಒಟ್ಟು 60 ಕೊಠಡಿಗಳ ನಿರ್ಮಾಣದ ಕಾಮಗಾರಿಯ ರೂ.985.00 ಲಕ್ಷಗಳ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 9 ಮುಅಕಾ 2025 ದಿನಾಂಕ:28.11.2025 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಟೆಂಡರ್ ಅನುಮೋದನೆಯ ಹಂತದಲ್ಲಿರುತ್ತದೆ.<br><br>ಪುರುಷರಿಗೆ 40 ಮತ್ತು ಮಹಿಳೆಯರಿಗೆ 40 ಶೌಚಾಲಯಗಳು ಹಾಗೂ ಸ್ನಾನಗೃಹಗಳು ಅಂದರೆ ಒಟ್ಟಾರೆಯಾಗಿ **80** ಶೌಚಾಲಯ ಮತ್ತು ಸ್ನಾನಗೃಹಗಳನ್ನು **ರೂ.340.00** ಲಕ್ಷಗಳ ವೆಚ್ಚದಲ್ಲಿ ನಿರ್ಮಾಣ ಮಾಡುವ ಕಾಮಗಾರಿಗೆ ಸರ್ಕಾರದ ಆದೇಶ ದಿನಾಂಕ:18.12.2025 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಟೆಂಡರ್ ಅನುಮೋದನೆಯ ಹಂತದಲ್ಲಿರುತ್ತದೆ.<br><br>ಸುಲಭ ಅಂತರಾಷ್ಟ್ರೀಯ ಸಾಮಾಜಿಕ ಸೇವಾ ಸಂಘಟನೆ ವತಿಯಿಂದ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಪ್ರದೇಶದಲ್ಲಿ ವಿವಿಧ ಎರಡು ಕಡೆಗಳಲ್ಲಿ ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ತಲಾ 07 ಶೌಚಾಲಯ ಹಾಗೂ ತಲಾ 02 ಸ್ನಾನಗೃಹಗಳನ್ನು ಹಾಗೂ 04 ಮೂತ್ರಾಲಯಗಳನ್ನು ನಿರ್ಮಾಣ ಮಾಡಲು 10ವರ್ಷಗಳ ಅವಧಿಗೆ ಗುತ್ತಿಗೆ ನೀಡಿ ನಿರ್ವಹಿಸಲು ಒಪ್ಪಿಗೆ ಕರಾರು ಮಾಡಿಕೊಳ್ಳಲಾಗಿದೆ.<br><br>ದ್ವಿತೀಯ ಹಂತದಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಿ ಪ್ರಾಧಿಕಾರದಲ್ಲಿ ಅನುಮೋದನೆ ನೀಡಿದ್ದು ಅಂದಾಜು ಪಟ್ಟಿ ತಯಾರಿಸಲಾಗಿರುತ್ತದೆ:- |

| ಕ್ರ.ಸಂ | ಕಾಮಗಾರಿಯ ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕು, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಪ್ರದೇಶಕ್ಕೆ ತುಂಗಭದ್ರಾ ಜಲಾಶಯದ ಹಿನ್ನೀರಿನಲ್ಲಿ ಗ್ರಾಮೀಣ ನೀರು ಸರಬರಾಜು ಇಲಾಖೆ ವತಿಯಿಂದ ನಿರ್ಮಿಸಲಾಗುತ್ತಿರುವ ಜಾಕ್‌ವೆಲ್‌ನ್ನು ಮೂಲಸ್ಥಾವರದಂತೆ ಪರಿಗಣಿಸಿ 7.00 ಎಂ.ಎಲ್.ಡಿ ಸಾಮರ್ಥ್ಯದ ಕುಡಿಯುವ ನೀರು ಒದಗಿಸುವ ಯೋಜನೆ | 2950.00 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|

| | | |
|---|---|---|
| 2 | ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಪ್ರದೇಶಕ್ಕೆ ಒಳಚರಂಡಿ ಯೋಜನೆ ಕಾಮಗಾರಿ. | 1780.00 |
| | **ಒಟ್ಟು** | **4730.00** |

1. ತುಂಗಭದ್ರ ಜಲಾಶಯದ ಹಿನ್ನೀರು ಮೂಲದಿಂದ ಸಾಮಾನ್ಯ ದಿನಗಳಲ್ಲಿ 3.00 MLD ವಾರ್ಷಿಕ ಜಾತ್ರೆ ಮಹೋತ್ಸವ ಸಂದರ್ಭದಲ್ಲಿ 2.50 ಲಕ್ಷ ಜನಸಂಖ್ಯೆಗೆ ಅನುಗುಣವಾಗಿ 7.00 MLD ಶ್ರೀ ಹುಲಿಗೆಮ್ಮ ದೇವಸ್ಥಾನಕ್ಕೆ ಒದಗಿಸಲು ತುಂಗ ಭದ್ರ ನೀರಾವರಿ ಇಲಾಖೆ ಯಿಂದ ಅನುಮೋದನೆ ಪಡೆಯಬೇಕಿರುತ್ತದೆ. ಪ್ರಸ್ತಾವನೆ ಅಧೀಕ್ಷಕ ಅಭಿಯಂತರರು ತುಂಗಭದ್ರ ಡ್ಯಾಂ ನೀರಾವರಿ ಇಲಾಖೆ ಇವರ ಹಂತದಲ್ಲಿರುತ್ತದೆ.

   ನೀರಾವರಿ ಇಲಾಖೆಯ ತುಂಗಭದ್ರ ಜಲಾಶಯ ಹಿನ್ನೀರಿನಲ್ಲಿ ಹಾಲಿ ಇರುವ ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಾಕ್ ವೆಲ್‌ನಲ್ಲಿ ವಂಪುಗಳನ್ನು ಅಳವಡಿಸುವ ಪ್ರಸ್ತಾವನೆಯು ಮುಖ್ಯ ಇಂಜಿನೀಯರು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಇವರಲ್ಲಿ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.

2. ಕರ್ನಾಟಕ ಒಳಚರಂಡಿ ಮತ್ತು ನೀರು ಸರಬರಾಜು ಇಲಾಖೆ, DPR ಯೋಜನೆಯು ಪ್ರಾಧಿಕಾರದ ಪರಿಶೀಲನೆಯಲ್ಲಿರುತ್ತದೆ. ದಿನಾಂಕ:16/03/2025 ರಂದು ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಮುಂದಿನ ಪ್ರಾಧಿಕಾರದ ಸಭೆಯಲ್ಲಿ ಒಳಚರಂಡಿ ಕಾಮಗಾರಿ ಸಂಬಂಧಪಟ್ಟಂತೆ ಮ್ಯಾನ್ಯೂವಲ್ (ಹಾಳುಗುಂಡಿಗಳು) ಬದಲಾಗಿ ಪ್ರೀಕ್ಯಾಸ್ಟ್ ಹಾಲುಗುಂಡಿಗಳನ್ನು ಅಳವಡಿಸುವ ಕುರಿತು ಪರಿಶೀಲಿಸಿ ಚರ್ಚಿಸಿ ಮುಂದಿನ ಕ್ರಮ ಅನುಸರಿಸಲು ಕಾರ್ಯನಿರ್ವಾಹಕ ಅಭಿಯಂತರರು, ಕೆ.ಯು.ಡಬ್ಲ್ಯೂ.ಎಸ್ ಇವರಿಗೆ ಸೂಚನೆ ನೀಡಲಾಗಿರುತ್ತದೆ. ಅಂದಾಜು ಪಟ್ಟಿಯನ್ನು ಅನುಮೋದನೆಗಾಗಿ ಮುಂದಿನ ಪ್ರಾಧಿಕಾರದ ಸಭೆಯಲ್ಲಿ ಮಂಡಿಸುವಂತೆ ಸೂಚಿಸಲಾಗಿದೆ.

3. ಅಲ್ಲದೇ ಮಹಾನಕ್ಷೆಯಂತೆ ಈ ಕೆಳಕಂಡ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೊಳ್ಳಲು ಉದ್ದೇಶಿಸಿದ್ದು, ಕಾಮಗಾರಿಗಳ ರೇಖಾ ಅಂದಾಜುಪಟ್ಟಿಯನ್ನು ಸಿದ್ದಪಡಿಸಲಾಗಿರುತ್ತದೆ.

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>
<table>
<tr><th>ಕ್ರ.ಸಂ</th><th>ಕಾಮಗಾರಿಯ ವಿವರ</th><th>ರೇಖಾ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ</th></tr>
<tr><td>1</td><td>ಮಹಾನಕ್ಷೆಯಲ್ಲಿ ಸೂಚಿಸಿರುವಂತೆ ವಿವಿಧ 3 ಕಡೆ ದೇವಸ್ಥಾನದ ಭಕ್ತಾಧಿಗಳ ಅನುಕೂಲಕ್ಕಾಗಿ ಪುರುಷ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಇರುವಂತೆ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣ</td><td>1020.00</td></tr>
<tr><td>2</td><td>ದೇವಾಲಯದ ಸುತ್ತ ಚಂದ್ರಶಾಲೆ ನಿರ್ಮಾಣ ಕಾಮಗಾರಿ.</td><td>3600.00</td></tr>
<tr><td>3</td><td>ದಾಸೋಹ ಭವನ ಮತ್ತು ಅಡುಗೆ ಕೋಣೆ ನಿರ್ಮಾಣ ಕಾಮಗಾರಿ.</td><td>1904.50</td></tr>
<tr><td>4</td><td>ದರ್ಶನದ ಕ್ಯೂಲೈನ್ ಕಾಂಪ್ಲೆಕ್ಸ್. ಹಾಗೂ ಮೊದಲನೇ ಮಹಡಿ ಹಾಗೂ 2ನೇ ಮಹಡಿಯಲ್ಲಿ ಭಕ್ತರು ತಂಗುದಾಣ ಹಾಗೂ ಭಕ್ತರು ತಂಗುವ ಡಾರ್ಮೆಟರಿ ಹಾಲ್</td><td>400.00</td></tr>
<tr><td>5</td><td>ಕ್ಲೋಸ್‌ಡ್ ಡಾರ್ಮೇಟರಿ ಓಪನ್ ಶೆಡ್. 4 ಕಡೆ (ಎ, ಬಿ, ಸಿ, ಡಿ)</td><td>4728.28</td></tr>
<tr><td>6</td><td>ದೇವಾಲಯದ ಸೌಕರ್ಯಗಳ ಸಂಕೀರ್ಣ</td><td>507.87</td></tr>
<tr><td>7</td><td>ಮೇನ್ ಪಾರ್ಕಿಂಗ್ & ಒಳ ಆವರಣ ಪಾರ್ಕಿಂಗ್.</td><td>800.00</td></tr>
<tr><td></td><td>ಒಟ್ಟು</td><td>12960.65</td></tr>
</table>
ಈ ಕಾಮಗಾರಿ ಗಳನ್ನೊಳಗೊಂಡಂತೆ ಪ್ರಸಾದ್ ಯೋಜನೆಯಡಿ ಅನುದಾದಾನ ಕೋರಿ, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ರಾಜ್ಯ ಸರ್ಕಾರದಿಂದ ವಿಶೇಷ ಅನುದಾನ ಒದಗಿಸುವಂತೆ ಪ್ರಸ್ತಾವನೆ ಸಲ್ಲಿಸಲಾಗುವುದು.
</td></tr>
<tr><td>ಇ)</td><td>ಈ ಯೋಜನೆ ಅಡಿಯಲ್ಲಿ ಒಳಗೊಂಡಿರುವ ಮೂಲಭೂತ ಸೌಕರ್ಯಗಳು ಯಾವುವು; (ವಿವರ ನೀಡುವುದು)</td><td>ಪ್ರಾಧಿಕಾರದ ಅನುಮೋದಿತ ಮಹಾನಕ್ಷೆಯನ್ವಯ ಉದ್ದೇಶಿಸಿರುವ ಪ್ರಮುಖ ಮೂಲಭೂತ ಸೌಕರ್ಯಗಳ ವಿವರವನ್ನು ಅನುಬಂಧ-01, ಅನುಬಂಧ-2 ಮತ್ತು ಅನುಬಂಧ-3ರಲ್ಲಿ ಒದಗಿಸಿದೆ.</td></tr>
<tr><td>ಈ)</td><td>ಸದರಿ ಕ್ರಿಯಾ ಯೋಜನೆ (Action Plan) ಹಾಗೂ ಮಾಸ್ಟರ್ ಪ್ಲ್ಯಾನ್‌ಗೆ ಸರ್ಕಾರದಿಂದ ಅನುಮೋದನೆ ಲಭಿಸಿರುವುದೇ; ಲಭಿಸಿದ್ದಲ್ಲಿ ಯಾವ ದಿನಾಂಕದಲ್ಲಿ ಅನುಮೋದನೆ ನೀಡಲಾಗಿದೆ; ಸಂಬಂಧಿಸಿದ ಸರ್ಕಾರದ ಆದೇಶ (GO) ಪ್ರತಿಯನ್ನು ಒದಗಿಸುವುದು;</td><td> ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಸಮಗ್ರ ಅಭಿವೃದ್ಧಿಗಾಗಿ (Master Plan) ಮಹಾನಕ್ಷೆಯನ್ನು ದಿನಾಂಕ.06.05.2025ರಂದು ಜರುಗಿದ ಪ್ರಾಧಿಕಾರದ ಸಭೆಯಲ್ಲಿ ಅನುಮೋದಿಸಲಾಗಿರುತ್ತದೆ. ನಿಯಮಾನುಸಾರ ಲೋಕೋಪಯೋಗಿ ಇಲಾಖೆಯ ಮುಖ್ಯ ಇಂಜಿನಿಯರ್ ರವರಿಂದ ಮಹಾನಕ್ಷೆಗೆ ಅನುಮೋದನೆ ಪಡೆಯಲು ಕ್ರಮ ವಹಿಸಲಾಗಿದೆ.
ಸದರಿ ಯೋಜನೆಯನ್ವಯ ಈ ಕೆಳಕಂಡ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ವಿವರ ಕೆಳಕಂಡಂತಿದೆ. (ಆದೇಶದ ಪ್ರತಿಗಳನ್ನು ಲಗತ್ತಿಸಿದೆ) </td></tr>
</table>

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>
<table>
<tr><th>ಕ್ರ.ಸಂ</th><th>ಕಾಮಗಾರಿಯ ವಿವರ</th><th>ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)</th><th>ಸರ್ಕಾರದ ಆದೇಶ</th></tr>
<tr><td>1</td><td>ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಹಾಲಿ ಇರುವ ಕಟ್ಟಡವನ್ನು ತೆರವುಗೊಳಿಸಿ ನೂತನ ದೇವಸ್ಥಾನ ನಿರ್ಮಾಣ ಕಾಮಗಾರಿ</td><td>999.50</td><td>ಕಂಇ 2 ಮುಅಕಾ 2025 ದಿನಾಂಕ:03.03.2025</td></tr>
<tr><td>2</td><td>ಅಮ್ಮ ನಿಯಲ ವಸತಿ ಸಂಕೀರ್ಣ 2 & 3 ನೇ ಮಹಡಿ ನಿರ್ಮಾಣ ಕಾಮಗಾರಿ</td><td>985.00</td><td>ಕಂಇ 9 ಮುಅಕಾ 2025 ದಿನಾಂಕ:28.11.2025</td></tr>
<tr><td>3</td><td>ಮಹಾನಕ್ಷೆಯಲ್ಲಿ ಸೂಚಿಸಿರುವಂತೆ ಭಕ್ತಾದಿಗಳ ಅನುಕೂಲಕ್ಕಾಗಿ ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಇರುವಂತೆ ಶೌಚಾಲಯ ಮತ್ತು ಸ್ನಾನಗೃಹ ನಿರ್ಮಾಣ</td><td>340.00</td><td>ಕಂಇ 8 ಮುಅಕಾ 2025 ದಿನಾಂಕ:18.12.2025</td></tr>
<tr><td></td><td>ಒಟ್ಟು</td><td>2324.50</td><td></td></tr>
</table>
</td></tr>
<tr><td>ಉ)</td><td>ಯೋಜನೆಯನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು; ಪ್ರಸ್ತುತ ಯಾವ ಯಾವ ಕಾಮಗಾರಿಗಳು ಪ್ರಾರಂಭಗೊಂಡಿವೆ; ಅವುಗಳ ವೆಚ್ಚ, ಗುತ್ತಿಗೆದಾರರ ಹೆಸರು ಹಾಗೂ ಪೂರ್ಣಗೊಳ್ಳುವ ಅವಧಿಯ ವಿವರ ಒದಗಿಸುವುದು;</td><td>1. ದೇವಾಲಯದ ಹಾಲಿ ಇರುವ ಕಟ್ಟಡವನ್ನು ತೆರವುಗೊಳಿಸಿ ದೇವಸ್ಥಾನವನ್ನು ರೂ.999.50 ಲಕ್ಷಗಳ ವೆಚ್ಚದಲ್ಲಿ ನೂತನವಾಗಿ ನಿರ್ಮಾಣ ಮಾಡುವ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 2 ಮುಅಕಾ 2025 ದಿನಾಂಕ:03.03.2025ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಪ್ರಥಮ ಕಂತಿನ ಮೊತ್ತ ರೂ.250.00 ಲಕ್ಷಗಳನ್ನು ಲೋಕೋಪಯೋಗಿ ಇಲಾಖೆಗೆ ಠೇವಣಿ ಮಾಡಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಯಶಸ್ವಿ ಟೆಂಡರ್ ದಾರರಾದ Sri Sujay Kumar Shetty (M/s SKS Karkala Infra Projects Private LTD) Class 1 PWD Contractor Karkala (ಗುತ್ತಿಗೆದಾರರು) ಇವರಿಗೆ ಕಾಮಗಾರಿಯನ್ನು ಪ್ರಾರಂಭಿಸಲು ಕಾರ್ಯಾದೇಶ ನೀಡಲಾಗಿದ್ದು, ಕಾಮಗಾರಿಯು ಪ್ರಾರಂಭವಾಗಿರುತ್ತದೆ.<br><br>2. ಅಮ್ಮ ನಿಲಯ ವಸತಿ ಸಂಕೀರ್ಣ 2 & 3ರ ಕಟ್ಟಡದ ಮೇಲೆ 2ನೇ ಮತ್ತು 3ನೇ ಮಹಡಿ ನಿರ್ಮಾಣದ ಕಾಮಗಾರಿಯ ರೂ.985.00 ಲಕ್ಷಗಳ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 9 ಮುಅಕಾ 2025 ದಿನಾಂಕ:28.11.2025 ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಟೆಂಡರ್ ಅನುಮೋದನೆಯ ಹಂತದಲ್ಲಿರುತ್ತದೆ.</td></tr>
</table>

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| | | 3. ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯ ಮತ್ತು ಸ್ನಾನಗೃಹಗಳನ್ನು ರೂ.340.00 ಲಕ್ಷಗಳ ವೆಚ್ಚದಲ್ಲಿ ನಿರ್ಮಾಣ ಮಾಡುವ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 8 ಮುಅಕಾ 2025 ದಿನಾಂಕ:18.12.2025 ರನ್ವಯ **ಆಡಳಿತಾತ್ಮಕ** ಅನುಮೋದನೆ ನೀಡಲಾಗಿದ್ದು, ಟೆಂಡರ್ ಅನುಮೋದನೆಯ ಹಂತದಲ್ಲಿರುತ್ತದೆ. |
| ಊ) | ದೇವಸ್ಥಾನದಲ್ಲಿ ಭಕ್ತಾದಿಗಳಿಗೆ ಅಗತ್ಯ ಮೂಲಸೌಕರ್ಯದ ಕೊರತೆಯಿಂದ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಯೇ; ಇದ್ದಲ್ಲಿ ಶಾಶ್ವತ ಪರಿಹಾರಕ್ಕಾಗಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳು ಯಾವುವು ? | ದೇವಸ್ಥಾನದ ಸಮಗ್ರ ಅಭಿವೃದ್ಧಿಗಾಗಿ ಹಾಗೂ ಭಕ್ತಾದಿಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲು ಕೈಗೊಂಡಿರುವ ಕಾಮಗಾರಿಯ ವಿವರಗಳನ್ನು ಉಪ ಪ್ರಶ್ನೆ **(ಆ)**ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ: ಕಂಇ 79 ಮುಸಪ್ರ 2026

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು

ಅನುಬಂಧ-1

ಕರ್ನಾಟಕ ಸರ್ಕಾರ

ಹಿಂದೂ ಧಾರ್ಮಿಕ ದತ್ತಿ ಇಲಾಖೆ

# ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಶ್ರೀ ಕ್ಷೇತ್ರ ಹುಲಿಗಿ ತಾ:ಜಿ:ಕೊಪ್ಪಳ

## ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿ ಕಾಮಗಾರಿಗಳ ಮತ್ತು ದೇವಸ್ಥಾನದ ಆರ್ಥಿಕ ಪರಿಸ್ಥಿತಿಯ ವಿವರ

ಪ್ರಾಧಿಕಾರದ ವತಿಯಿಂದ ಕೈಗೊಂಡಿರುವ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನ

| ಕ್ರ.ಸಂ. | ಕಾಮಗಾರಿಯ ವಿವರ | ಅಂದಾಜು ಮೊತ್ತ ಲಕ್ಷಗಳಲ್ಲಿ | ಪ್ರಾಧಿಕಾರದಿಂದ ಬಿಡುಗೆ ಮಾಡಿದ ಮೊತ್ತ ಲಕ್ಷಗಳಲ್ಲಿ | ಆಡಳಿತಾತ್ಮಕ ಮಂಜೂರಾತಿ ನೀಡಿದ ಸರ್ಕಾರದ ಆದೇಶ ಸಂಖ್ಯೆ ಮತ್ತು ದಿನಾಂಕ. | ಕಾಮಗಾರಿಯಲ್ಲಿ ಇರುವ ಸೌಕರ್ಯಗಳ ವಿವರ | | ಕಾಮಗಾರಿಯ ಪ್ರಸ್ತುತ ಹಂತ |
|---|---|---|---|---|---|---|---|
| 1 | ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನ ಹಾಲಿ ಇರುವ ಕಟ್ಟಡವನ್ನು ತೆರವುಗೊಳಿಸಿ ನೂತನ ದೇವಸ್ಥಾನ ನಿರ್ಮಾಣ ಕಾಮಗಾರಿ. | 999.50 | 250.00 | ಕಂಇ 2 ಮುಅಕಾ 2025 ದಿನಾಂಕ. 03.03.2025 | ನೂತನ ದೇವಸ್ಥಾನ ನಿರ್ಮಾಣ | | Sri Sujay Kumar Shetty (M/s SKS Karkala Infra Projects Private LTD ) Class I PWD Contractor Karkala ಇವರಿಗೆ LOA ನೀಡಲಾಗಿದೆ. |
| 2 | ಅಮ್ಮ ನಿಲಯ ವಸತಿ ಸಂಕೀರ್ಣ 2 & 3 ನೇ ಮಹಡಿ ನಿರ್ಮಾಣ ಕಾಮಗಾರಿ. | 985.00 | 492.50 | ಕಂಇ 9 ಮುಅಕಾ 2025 ದಿನಾಂಕ. 28.11.2025 | 2 ನೇ ಮಹಡಿಯಲ್ಲಿ 30 ಕೊಠಡಿಗಳು, 3ನೇ ಮಹಡಿಯಲ್ಲಿ 30 ಕೊಠಡಿಗಳು, | | ಅಂದಾಜು ಪತ್ರಿಕೆಗೆ ತಾಂತ್ರಿಕ ಮಂಜೂರಾತಿ ದೊರೆಕಿದ್ದು, DTS ಅನುಮೋದನೆಗಾಗಿ ಸಲ್ಲಿಸಲಾಗಿದೆ. |
| 3 | ಮಹಾನವಮಿಯಲ್ಲಿ ಸೂಚಿಸಿರುವಂತೆ ಭಕ್ತಾಧಿಗಳ ಅನುಕೂಲಕ್ಕಾಗಿ ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಇರುವಂತೆ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣ. | 340.00 | 170.00 | ಕಂಇ 8 ಮುಅಕಾ 2025 ದಿನಾಂಕ. 18.12.2025 | ಪುರುಷರಿಗೆ<br>**ನೆಲಮಹಡಿ**<br>10 ಶೌಚಾ<br>10ಸ್ನಾನ<br>**ಮೊದಲಮಹಡಿ**<br>10 ಶೌಚಾ<br>10ಸ್ನಾನ | ಮಹಿಳೆಯರಿಗೆ<br>**ನೆಲಮಹಡಿ**<br>10 ಶೌಚಾ<br>10ಸ್ನಾನ<br>**ಮೊದಲಮಹಡಿ**<br>10 ಶೌಚಾ<br>10ಸ್ನಾನ | ಅಂದಾಜು ಪತ್ರಿಕೆಗೆ ತಾಂತ್ರಿಕ ಮಂಜೂರಾತಿ ದೊರೆಕಿದ್ದು, DTS ಅನುಮೋದನೆಗಾಗಿ ಸಲ್ಲಿಸಲಾಗಿದೆ. |
| | ಒಟ್ಟು | 2324.50 | 912.50 | | | | |

ಕಾರ್ಯದರ್ಶಿಗಳು

ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ

ಶ್ರೀಕ್ಷೇತ್ರ ಹುಲಿಗಿ - 583234 ತಾ॥ ಜಿ॥ ಕೊಪ್ಪಳ.

ಅನುಬಂಧ - 2

**ಹುಲಗಿ ಕ್ಷೇತ್ರ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳಿಗೆ ಪ್ರಾಧಿಕಾರದಲ್ಲಿ ಅನುಮೋದನೆ ಪಡೆದುಕೊಂಡು ಡಿ.ಪಿ.ಆರ್ ಪ್ರಾಧಿಕಾರದ ಪರಿಶೀಲನೆಗೆ ಇರುವ ಕಾಮಗಾರಿಗಳ ವಿವರ**

| ಕ್ರ ಸಂ. | ಕಾಮಗಾರಿ ವಿವರ | ಅಂದಾಜು ಪಟ್ಟಿ ಮೊತ್ತ ರೂ ಲಕ್ಷಗಳಲ್ಲಿ | ಕಾಮಗಾರಿ ಕೈಗೊಳ್ಳುವ ಇಲಾಖೆ. |
|---|---|---|---|
| 1. | ತುಂಗಭದ್ರಾ ಜಲಾಶಯದ ಹಿನ್ನೀರಿನಲ್ಲಿ ಗ್ರಾಮೀಣ ನೀರು ಸರಬರಾಜು ಇಲಾಖೆ ವತಿಯಿಂದ ನಿರ್ಮಿಸಲಾಗುತ್ತಿರುವ ಜಾಕ್ ವೆಲ್‌ನ್ನು ಮೂಲಸ್ಥಾವರದಂತೆ ಪರಿಗಣಿಸಿ 7.00 ಎಂ.ಎಲ್.ಡಿ ಸಾಮರ್ಥ್ಯದ ಕುಡಿಯುವ ನೀರು ಒದಗಿಸುವ ಯೋಜನೆ | 2950.00 | ತುಂಗಭದ್ರ ಜಲಾಶಯದ ಹಿನ್ನೀರು ಮೂಲದಿಂದ ಸಾಮಾನ್ಯ ದಿನಗಳಲ್ಲಿ 3.00 MLD ವಾರ್ಷಿಕ ಜಾತ್ರ ಮಹೋತ್ಸವ ಸಂಧರ್ಬದಲ್ಲಿ 2.50 ಲಕ್ಷ ಜನಸಂಖ್ಯೆಗೆ ಅನುಗುಣವಾಗಿ 7.00 MLD ಶ್ರೀ ಹುಲಿಗೆಮ್ಮ ದೇವಸ್ಥಾನಕ್ಕೆ ಒದಗಿಸಲು ತುಂಗ ಭದ್ರ ನೀರಾವರಿ ಇಲಾಖೆ ಯಿಂದ ಅನುಮೋದನೆ ಪಡೆಯಬೇಕಿರುತ್ತದೆ. ಪ್ರಸ್ತಾವನೆ ಅಧೀಕ್ಷಕ ಅಭಿಯಂತರರು ತುಂಗಭದ್ರ ಡ್ಯಾಂ ನೀರಾವರಿ ಇಲಾಖೆ ಇವರ ಹಂತದಲ್ಲಿರುತ್ತದೆ.<br>ನೀರಾವರಿ ಇಲಾಖೆಯ ತುಂಗಭದ್ರ ಜಲಾಶಯ ಹಿನ್ನೀರಿನಲ್ಲಿ ಹಾಲಿ ಇರುವ ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಾಕ್ ವೆಲ್‌ನಲ್ಲಿ ಪಂಪುಗಳನ್ನು ಅಳವಡಿಸುವ ಪ್ರಸ್ತಾವನೆಯು ಮುಖ್ಯ ಇಂಜಿನೀಯರು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಇವರಲ್ಲಿ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br>ಕರ್ನಾಟಕ ಒಳಚರಂಡಿ ಮತ್ತು ನೀರು ಸರಬರಾಜು ಇಲಾಖೆ, DPR ಯೋಜನೆಯು ಪ್ರಾಧಿಕಾರದ ಪರಿಶೀಲನೆಯಲ್ಲಿರುತ್ತದೆ. |
| 2. | ಒಳಚರಂಡಿ ನಿರ್ಮಾಣ ಯೋಜನೆ | ರೂ 1780.00 ಲಕ್ಷಗಳ | ದಿನಾಂಕ 16/03/2025 ರಂದು ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಮುಂದಿನ ಪ್ರಾಧಿಕಾರದ ಸಭೆಯಲ್ಲಿ ಒಳಚರಂಡಿ ಕಾಮಗಾರಿ ಸಂಬಂಧಪಟ್ಟಂತೆ ಮ್ಯಾನ್ಯೂವಲ್ (ಹಾಳುಗುಂಡಿಗಳು) ಬದಲಾಗಿ ಪ್ರೀಕ್ಯಾಸ್ಟ ಹಾಲುಗುಂಡಿಗಳನ್ನು ಅಳವಡಿಸುವ ಕುರಿತು ಪರಿಶೀಲಿಸಿ ಚರ್ಚಿಸಿ ಮುಂದಿನ ಕ್ರಮ ಅನುಸರಿಸಲು ಕಾಯರ್ಯನಿರ್ವಾಹಕ ಅಭಿಯಂತರರು, ಕೆ.ಯು.ಡಬ್ಲ್ಯೂ.ಎಸ್ ಇವರಿಗೆ ಸೂಚನೆ ನೀಡಲಾಗಿರುತ್ತದೆ. |

ಕಾರ್ಯದರ್ಶಿಗಳು
ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ
ಶ್ರೀಕ್ಷೇತ್ರ ಹುಲಿಗಿ - 583234 ತಾ ಜಿ ಕೊಪ್ಪಳ.

ಅನುಬಂಧ-3

**ಹುಲಗಿ ಕ್ಷೇತ್ರ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಕಾಮಗಾರಿಗಳಿಗೆ ಪ್ರಾಧಿಕಾರದಲ್ಲಿ ಅನುಮೋದಿಸಲ್ಪಟ್ಟಿರುವ ವಿವರ**

| ಕ್ರ ಸಂ. | ಕಾಮಗಾರಿ ವಿವರ | ಷರಾ |
|---|---|---|
| 1. | ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಸುತ್ತಲೂ ಚಂದ್ರಶಾಲೆ ಮತ್ತು ನಾಲ್ಕು ಗೋಪುರಗಳ ನಿರ್ಮಾ ಕಾಮಗಾರಿ | ಯೋಜನೆಯ ಡಿಪಿಆರ್ ತಯಾರಿಸಲು ಲೋಕೋಪಯೋಗಿ ಇಲಾಖೆಯವರಿಗೆ ವಹಿಸಿದೆ |
| 2. | ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕಾರ್ಯಾಲಯಕ್ಕೆ ಸುಸಜ್ಜಿತ ಆಡಳಿತ ಕಛೇರಿಯನ್ನು ನಿರ್ಮಿಸುವ ಕುರಿತು. | |
| 3. | ಶ್ರೀಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಯೋಜಿತ ಮಹಾ ನಕ್ಷೆಯ ಪ್ರಕಾರ ಪುರುಷರಿಗೆ ಮತ್ತು ಮಹಿಳೆಯರಿಗೆ ವಿವಿಧ 04 ಕಡೆ ಶೌಚಾಲಯ ಸ್ನಾನ ಗೃಹ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ | 03 ಕಡೆ ಕಡೆ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣ ಮಾಡಲು ಕಾಮಗಾರಿ ಯೋಜನೆಯ ಡಿಪಿಆರ್ ತಯಾರಿಸಲು ಲೋಕೋಪಯೋಗಿ ಇಲಾಖೆಯವರಿಗೆ ವಹಿಸಿದೆ.<br>01 ಕಡೆ ಶೌಚಾಲಯ ಮತ್ತು ಸ್ನಾನ ಗೃಹ ನಿರ್ಮಾಣ ಮಾಡಲು ಕಾಮಗಾರಿ ಕೈಗೊಳ್ಳಲು ಸರ್ಕಾರದ ಆದೇಶ ಪಡೆಯಲಾಗಿದೆ ಮತ್ತು ಲೋಕೋಪಯೋಗಿ ಇಲಾಖೆಯಿಂದ ಟೆಂಡರ್ ಆಹ್ವಾನಿಸಲಾಗಿರುತ್ತದೆ. |

ಕಾರ್ಯದರ್ಶಿಗಳು
ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ
ಶ್ರೀಕ್ಷೇತ್ರ ಹುಲಗಿ - 583234 ತಾ ಜಿ ಕೊಪ್ಪಳ.

## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:-** ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಾಲಯದ ಹಳೆಯ ಕಟ್ಟಡವನ್ನು ತೆರವುಗೊಳಿಸಿ ಹೊಸದಾಗಿ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿಯ ಅಂದಾಜುಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

**ಓದಲಾಗಿದೆ:-** ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಡತ ಸಂಖ್ಯೆ:
HRICE-CNR0CNR1/154/2024-CNREND-HRICE

*****

**ಪ್ರಸ್ತಾವನೆ:**

ಮೇಲೆ ಓದಲಾದ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರ ಪ್ರಸ್ತಾವನೆಯಲ್ಲಿ, ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನವು ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಡುವ ಪ್ರವರ್ಗ "ಎ" ಅಧಿಸೂಚಿತ ದೇವಸ್ಥಾನವಾಗಿದ್ದು, ಸದರಿ ದೇವಸ್ಥಾನಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 16 ಮುಸೇವಿ 2024 ದಿನಾಂಕ:28.06.2024 ರನ್ವಯ ಶ್ರೀ ಹುಲಿಗೆಮ್ಮದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕಾಯ್ದೆಯನ್ನು ದಿನಾಂಕ:01.07.2024 ರಿಂದ ಜಾರಿಗೊಳಿಸಲಾಗಿರುತ್ತದೆ.

ಮಾನ್ಯ ಸಚಿವರು ಸಾರಿಗೆ ಮತ್ತು ಮುಜರಾಯಿ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಅಧ್ಯಕ್ಷರು, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಶ್ರೀ ಕ್ಷೇತ್ರ ಹುಲಿಗಿ ರವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆ ನಡುವಳಿ ದಿನಾಂಕ:30.09.2024ರ ವಿಷಯ:ಸಂಖ್ಯೆ-2ರಲ್ಲಿ ಈ ದೇವಸ್ಥಾನದ ಹಳೆಯ ಕಟ್ಟಡವನ್ನು ತೆರವುಗೊಳಿಸಿ, ಹೊಸದಾಗಿ ದೇವಾಲಯವನ್ನು ಕಲ್ಲಿನಿಂದ ನಿರ್ಮಾಣ ಮಾಡುವ ಕಾಮಗಾರಿ ಕೈಗೊಳ್ಳಲು, ವಾಸ್ತು ಪ್ರಕಾರ ಕಲ್ಲಿನಿಂದ ಗರ್ಭಗುಡಿ ತಳಪಾಯ (ಬೇಸಮೆಂಟ್) ಮಂಟಪ, ಗರ್ಭ ಶಿಖರ ಗೋಪುರವನ್ನು ನಿರ್ಮಿಸಲು ಲೋಕೋಪಯೋಗಿ ಇಲಾಖೆಯವರು ರೂ.999.50 ಲಕ್ಷಗಳ ಅಂದಾಜುಪಟ್ಟಿ, ನಕ್ಷೆಯನ್ನು ತಯಾರಿಸಿರುತ್ತಾರೆ. ಸದರಿ ಅಂದಾಜು ಪಟ್ಟಿ, ನಕ್ಷೆಯ ಪ್ರಕಾರ ಕಾಮಗಾರಿಯನ್ನು ಕೈಗೊಳ್ಳಲು ಸಭೆಯು ತೀರ್ಮಾನಿಸಿರುತ್ತದೆ. ಈ ಸಂಬಂಧ ವಾಸ್ತು ಶಿಲ್ಪ ಸಮಿತಿಯ ಮುಂದೆ ಪುನರ್ ಪರಿಶೀಲನೆ ಮಾಡಲು ತೀರ್ಮಾನಿಸಲಾಯಿತು.

ಈ ವಿಷಯದ ಬಗ್ಗೆ, ದಿನಾಂಕ:05.10.2024 ರಂದು ನಡೆದ ಕರ್ನಾಟಕ ರಾಜ್ಯ ವಾಸ್ತುಶಿಲ್ಪ ಸಮಿತಿ ಸಭೆಯ ವಿಷಯ ಸೂಚಿ:01ರ ನಿರ್ಣಯದಂತೆ ಹಾಗೂ ಹಿಂದೂ ಧಾರ್ಮಿಕ ದತ್ತಿ ಕಾಯ್ದೆ 1997 ನಿಯಮಾವಳಿಗಳು 2002ರ ನಿಯಮ 40 ಎ(3) ರನ್ವಯ ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಹುಲಿಗಿ ಕ್ಷೇತ್ರ ಶ್ರೀ ಹುಲಿಗೆಮ್ಮ ದೇವಿ ದೇವಾಲಯದ ಜೀರ್ಣೋದ್ಧಾರ ಕಾಮಗಾರಿಗಳನ್ನು ಮಾಡುವ ಪೂರ್ವದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅಂದಾಜು ಪಟ್ಟಿ ಮತ್ತು ನಕ್ಷೆಗಳಿಗೆ ಅನುಮತಿ ಪಡೆದು ಹಾಗೂ ಕೆಲವು ಷರತ್ತಿಗೊಳಪಟ್ಟು ಜೀರ್ಣೋದ್ಧಾರ ಕಾಮಗಾರಿಯನ್ನು ಮಾಡಲು ಅನುಮತಿ ನೀಡಲಾಗಿರುತ್ತದೆ.

ಕಾರ್ಯದರ್ಶಿಗಳು, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಶ್ರೀ ಕ್ಷೇತ್ರ, ಹುಲಿಗಿ ಇವರು ಕಾಮಗಾರಿಯನ್ನು ಕೈಗೊಳ್ಳಲು ರೂ.999.50 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ, ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಹಳೆಯ ಕಟ್ಟಡವನ್ನು ತೆರವುಗೊಳಿಸಿ ಹೊಸದಾಗಿ ಕಲ್ಲಿನಿಂದ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿಯ ರೂ.999.50 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಜಿಲ್ಲಾಧಿಕಾರಿಗಳು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ಇವರ ಪ್ರಸ್ತಾವನೆಯಂತೆ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಹಳೆಯ ಕಟ್ಟಡವನ್ನು ತೆರವುಗೊಳಿಸಿ ಹೊಸದಾಗಿ ಕಲ್ಲಿನಿಂದ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿಯ ರೂ.999.50 ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಬೆಂಗಳೂರು ರವರು ಕೋರಿರುತ್ತಾರೆ.

......2



File No. RD/2/MUKA/2025-MUZ-REVENUE DEPATMENT SEC (Computer No. 1646838)
Generated from eOffice by MADEV NARASANNAVAR, RD-MUZ-ASST(MN), ASSISTANT, REVENUE DEPARTMENT SEC on 24/03/2026 02:53 PM

ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕಂಇ 2 ಮುಅಕಾ 2025**
**ಬೆಂಗಳೂರು, ದಿನಾಂಕ:03.03.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕು, ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಹಳೆಯ ಕಟ್ಟಡವನ್ನು ತೆರವುಗೊಳಿಸಿ ಹೊಸದಾಗಿ ಕಲ್ಲಿನಿಂದ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿಯನ್ನು ಕೆ.ಟಿ.ಪಿ.ಪಿ ಕಾಯ್ದೆ ಮತ್ತು ನಿಯಮಗಳನ್ನು ಪಾಲಿಸುವ ಷರತ್ತಿಗೊಳಪಟ್ಟು, ಸದರಿ ಕಾಮಗಾರಿಗೆ ತಗಲುವ ವೆಚ್ಚವನ್ನು ದೇವಾಲಯದ ನಿಧಿಯಿಂದ ಭರಿಸಿ, ಕಾಮಗಾರಿ ಕೈಗೊಳ್ಳಲು ರೂ.999.50 ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಪಿ ಹೇಮಂತರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಲೆಕ್ಕ ಪತ್ರ/ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.(ಸದರಿ ಆದೇಶದೊಂದಿಗೆ ಮೂಲ ಅಂದಾಜು ಪಟ್ಟಿಯನ್ನು ಆಯುಕ್ತರಿಗೆ ಹಿಂದಿರುಗಿಸಲಾಗಿದೆ
3. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
4. ಸಂಬಂಧಪಟ್ಟ ಧಾರ್ಮಿಕ ಸಂಸ್ಥೆಗೆ - (ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಮುಖಾಂತರ)

**ಪ್ರತಿ:-**

1. ಧಾರ್ಮಿಕ ದತ್ತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ, ಭೂಮಿ ಮತ್ತು ಯು.ಪಿ.ಓ.ಆರ್) ಇವರ ಆಪ್ತ ಸಹಾಯಕರು.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.



File No. RD/2/MUKA/2025-MUZ-REVENUE DEPATMENT SEC (Computer No. 1646838)
Generated from eOffice by MADEV NARASANNAVAR, RD-MUZ-ASST(MN), ASSISTANT, REVENUE DEPARTMENT SEC on 24/03/2026 02:53 PM

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕು, ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಾಲಯದಲ್ಲಿ ಶ್ರೀ ಅಮ್ಮ ನಿಲಯದ 2ನೇ ಮತ್ತು 3ನೇ ಮಹಡಿ ನಿರ್ಮಾಣ ಮಾಡುವ ಕಾಮಗಾರಿಯ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಡತ ಸಂಖ್ಯೆ: HRICE-CNR0CNR1/101/2025-CNREND-HRICE.

* * * * *

**ಪ್ರಸ್ತಾವನೆ:-**

ಮೇಲೆ ಓದಲಾದ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಡತದಲ್ಲಿನ ಪ್ರಸ್ತಾವನೆಯಲ್ಲಿ, ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನವು ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಡುವ ಪ್ರವರ್ಗ "ಎ" ಅಧಿಸೂಚಿತ ದೇವಸ್ಥಾನವಾಗಿದ್ದು, ಸದರಿ ದೇವಸ್ಥಾನಕ್ಕೆ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕಾಯ್ದೆಯನ್ನು ದಿನಾಂಕ:01.07.2024 ರಿಂದ ಜಾರಿಗೊಳಿಸಲಾಗಿರುತ್ತದೆ.

ಮುಂದುವರೆದು, ಕೊಪ್ಪಳ ಜಿಲ್ಲೆಯ ಕೊಪ್ಪಳತಾಲ್ಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ಅಮ್ಮ ನಿಲಯದ ನೆಲಮಹಡಿ ಮತ್ತು ಮೊದಲನೇ ಮಹಡಿ ನಿರ್ಮಿಸಿ ಭಕ್ತಾಧಿಗಳಿಗೆ ಉಳಿದುಕೊಳ್ಳಲು ವ್ಯವಸ್ಥೆ ಮಾಡಲಾಗಿದ್ದು, ಆದರೆ ದೇವಾಲಯಕ್ಕೆ ಬರುವ ಭಕ್ತರಿಗೆ ಉಳಿದುಕೊಳ್ಳಲು ಇನ್ನು ಹೆಚ್ಚಿನ ವ್ಯವಸ್ಥೆಯನ್ನು ಮಾಡಲು ದಿನಾಂಕ:06.05.2025 ರಂದು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಪ್ರಥಮ ಸಭೆಯ ನಡವಳಿಯ ವಿಷಯ: 3ರಲ್ಲಿ ಚರ್ಚಿಸಿ ಶ್ರೀ ಅಮ್ಮ ನಿಲಯದ 2 ಮತ್ತು 3 ನೇ ಮಹಡಿ ನಿರ್ಮಾಣ ಮಾಡುವ ಕಾಮಗಾರಿಯನ್ನು ಕೈಗೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ಪಡೆದು ನಿಯಮಾನುಸಾರ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

ಆದುದರಿಂದ, ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ಇವರ ಪ್ರಸ್ತಾವನೆಯಂತೆ, ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದಲ್ಲಿ ಶ್ರೀ ಅಮ್ಮ ನಿಲಯದ 2 ಮತ್ತು 3 ನೇ ಮಹಡಿ ನಿರ್ಮಾಣ ಮಾಡುವ ಕಾಮಗಾರಿಯ ರೂ.985.00 ಲಕ್ಷಗಳ ಅಂದಾಜು ಪಟ್ಟಿ ಹಾಗೂ ನಕ್ಷೆಯನ್ನು ಕಾರ್ಯಪಾಲಕ ಅಭಿಯಂತಯರರು, ಲೋಕೋಪಯೋಗಿ ಇಲಾಖೆ ವಿಭಾಗ, ಕೊಪ್ಪಳ ಇವರು ತಯಾರಿಸಿದ್ದು, ಸದರಿ ಅಂದಾಜು ಪಟ್ಟಿ ಹಾಗೂ ನಕ್ಷೆಗೆ ಮುಖ್ಯ ಇಂಜಿನೀಯರ್, ಲೋಕೋಪಯೋಗಿ ಇಲಾಖೆ, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ) ಕಲಬುರಗಿ ರವರು ತಾಂತ್ರಿಕ ಪರಿಶೀಲನೆಯನ್ನು ಮಾಡಿ ಅನುಮೋದನೆಯನ್ನು ನೀಡಿರುವುದರಿಂದ, ಸದರಿ ಅಂದಾಜು ಪಟ್ಟಿಯ ಕಾಮಗಾರಿಗೆ ಷರತ್ತಿಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.



File No. RD/9/MUKA/2025-MUZ-REVENUE DEPATMENT SEC (Computer No. 1912677)
Generated from eOffice by MADEV NARASANNAVAR, RD-MUZ-ASST(MN), ASSISTANT, REVENUE DEPARTMENT SEC on 10/12/2025 05:39 PM

ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕಂಇ 9 ಮುಅಕಾ 2025,**
**ಬೆಂಗಳೂರು, ದಿನಾಂಕ:28.11.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದಲ್ಲಿ ಶ್ರೀ ಅಮ್ಮ ನಿಲಯದ 2ನೇ ಮತ್ತು 3ನೇ ಮಹಡಿ ನಿರ್ಮಾಣದ ರೂ.985.00 ಲಕ್ಷಗಳ ಅಂದಾಜು ವೆಚ್ಚದ ಕಾಮಗಾರಿಯನ್ನು ನಿಯಮಾನುಸಾರ ಲೋಕೋಪಯೋಗಿ ಇಲಾಖೆಯ ಮುಖಾಂತರ ಕೆ.ಟಿ.ಪಿ.ಪಿ. ಅಧಿನಿಯಮ, 1999 ಮತ್ತು ನಿಯಮಗಳು, 2000 ರನ್ವಯ ಟೆಂಡರ್ ಆಹ್ವಾನಿಸಿ, ಸದರಿ ವೆಚ್ಚವನ್ನು ದೇವಸ್ಥಾನದ ನಿಧಿಯಿಂದ ಭರಿಸಿ, ಕಾಮಗಾರಿ ಕೈಗೊಳ್ಳಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಸ್ಥಳೀಯ ಪ್ರಾಧಿಕಾರದಿಂದ ಕಟ್ಟಡದ Building Plan ವಿನ್ಯಾಸ ಮತ್ತು Layout Planಗೆ ಅನುಮೋದನೆ ಮತ್ತು ನಿರಾಕ್ಷೇಪಣ ಪತ್ರ (NOC) ಪೂರ್ವಾನುಮತಿಯಾಗಿ ಪಡೆದುಕೊಳ್ಳತಕ್ಕದ್ದು.
2. ಧಾರ್ಮಿಕ ದತ್ತಿ ಸಂಸ್ಥೆಗೆ ಸಂಬಂಧಿಸಿದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಪೂರ್ವದಲ್ಲಿ ಉದ್ದೇಶಿತ ಕಾಮಗಾರಿಯ ಸ್ಥಳ/ಜಾಗ ಸರ್ಕಾರದ ಜಮೀನನ್ನು ಒತ್ತುವರಿ ಮಾಡಿ ಕಟ್ಟುವಂತಿಲ್ಲವೆಂಬುದನ್ನು ಹಾಗೂ ಸದರಿ ಜಮೀನಿನ ಮಾಲೀಕತ್ವವನ್ನು ಪಡಿಸಿಕೊಳ್ಳುವುದು (Rights/Ownership of the said land) ಹಾಗೂ ಸಕ್ಷಮ ಪ್ರಾಧಿಕಾರದಿಂದ ಅನುಮೋದಿತವಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
3. ಸಂಬಂಧಿಸಿದ IS ಮತ್ತು NBC ಕೋಡ್‌ಗಳ ಮಾನದಂಡಕ್ಕೆ ಕಾಮಗಾರಿಯನ್ನು ನಿರ್ವಹಿಸಬೇಕು.
4. For items where Market rate is adopted (Non SR items) Quotations may be called & get approved by the competent authority before taking up the work ( ie., from Superintend Engineer, PWD/PRED/KRIDL, concerned circles).
5. ಕಾಮಗಾರಿಯ ಬಳಸಲಾದ ಎಲ್ಲಾ ಕಚ್ಚಾ ಸಾಮಾಗ್ರಿಗಳ ಪರೀಕ್ಷೆಗಳನ್ನು, ವಿನ್ಯಾಸ ಮಿಶ್ರಣವನ್ನು ಗುಣಭರವಸೆ ಉಪ ವಿಭಾಗ, ಲೋಕೋಪಯೋಗಿ ಇಲಾಖೆ, (Quality Assurance)ರವರಿಂದ ಪಡೆದು, ಪರೀಕ್ಷೆ ಮಾಡಿಸಿ ವಿಶಿಷ್ಟ ವಿವರಣೆಗೆ ಅನುಗುಣವಾಗಿರುವುದನ್ನು ಖಾತರಿಪಡಿಸಿಕೊಂಡು ಬಳಸುವುದು, ಕಚ್ಚಾ ಸಾಮಾಗ್ರಿಗಳ ಫಲಿತಾಂಶಗಳ ಒಂದು ಪ್ರತಿಯನ್ನು ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಸಲ್ಲಿಸುವುದು.
6. ಸರ್ಕಾರದಿಂದ ಆಗಿಂದ್ದಾಗ್ಗೆ ಸೂಚಿಸಲಾಗುವ ಸೂಚನೆಗಳನ್ವಯ ಕ್ರಮ ವಹಿಸುವುದು.
7. ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ನಿಯಮಾನುಸಾರ ಹಸ್ತಾಂತರ ಮಾಡತಕ್ಕದ್ದು.
8. ಮೂಲ ಅಂದಾಜಿನಲ್ಲಿ ಯಾವುದಾದರು ಮಾರ್ಪಾಡುಗಳು, ಹೆಚ್ಚುವರಿ ಅಂಶಗಳು ಮಾಡಬೇಕಾದಲ್ಲಿ ಸಂಹಿತೆ ಪ್ರಕಾರ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡದು ಮುಂದುವರೆಸುವುದು.
9. ಕಾಮಗಾರಿಯನ್ನು KTPP ಅಧಿನಿಯಮದ ಅಡಿಯಲ್ಲಿ ಹಾಗೂ ಸರ್ಕಾರದ ಸಂಬಂಧಪಟ್ಟ ಆದೇಶಗಳಂತೆ ಕಾಮಗಾರಿಯನ್ನು ಅನುಷ್ಠಾನಗೊಳಿಸುವುದು.
10. ಕಾಮಗಾರಿಯನ್ನು ಪರಿಣಿತಿ ಹಾಗೂ ಅನುಭವಸ್ಥ ತಾಂತ್ರಿಕ ಸಿಬ್ಬಂದಿಯ ಮಾರ್ಗದರ್ಶನದಲ್ಲಿ ಕಾರ್ಯಗತಗೊಳಿಸಬೇಕು.
11. ಕಾಮಗಾರಿ ನಿರ್ವಹಣೆಯ ಬಗ್ಗೆ ವಾಚ್ ರಿಜಿಸ್ಟರ್ ಸಲ್ಲಿಸುವುದು.



File No. RD/9/MUKA/2025-MUZ-REVENUE DEPATMENT SEC (Computer No. 1912677)
Generated from eOffice by MADEV NARASANNAVAR, RD-MUZ-ASST(MN), ASSISTANT, REVENUE DEPARTMENT SEC on 10/12/2025 05:28 PM

12. ಸದರಿ ಕಾಮಗಾರಿಯ ಪೂರ್ವದಲ್ಲಿ, ಪ್ರಗತಿಯಲ್ಲಿರುವಾಗ ಮತ್ತು ಪೂರ್ಣಗೊಂಡ ನಂತರದ ಒಳ ಮತ್ತು ಹೊರ ಭಾಗದಲ್ಲಿ ಜಿ.ಪಿ.ಎಸ್.ಛಾಯಾ ಚಿತ್ರಗಳನ್ನು / ವಿಡಿಯೋ ಚಿತ್ರೀಕರಣವನ್ನು ಪ್ರಸ್ತುತ ಪಡಿಸಬೇಕಿರುತ್ತದೆ.
13. ಕಾಮಗಾರಿಗೆ ಬಳಸಲಾದ ಕಚ್ಚಾ ಸಾಮಗ್ರಿಗಳ ಗುಣಮಟ್ಟ ಪರೀಕ್ಷಾ ವರದಿಯನ್ನು ಸಲ್ಲಿಸುವುದು.
14. ಆಡಳಿತಾತ್ಮಕ ಮಂಜೂರಾತಿ ನೀಡಿದ ಅಂದಾಜುಪಟ್ಟಿಯಂತೆ ಕಾಮಗಾರಿಯನ್ನು ನಿರ್ವಹಿಸಿದ ಬಗ್ಗೆ ಲೋಕೋಪಯೋಗಿ ಇಲಾಖೆ/ ಪಂಚಾಯತ್ ರಾಜ್ ಇಲಾಖೆಯಿಂದ ಚೆಕ್ ಮೆಶರ್ಮೆಂಟ್ ಮಾಡಿಸಿ ಎಂ.ಬಿ. ಪುಸ್ತಕದಲ್ಲಿ ದಾಖಲುಮಾಡಿ ದೃಢೀಕರಣ ಪಡೆಯುವುದು, ಇನ್ನೊಂದು ಪ್ರತಿಯನ್ನು ದೇವಾಲಯದಲ್ಲಿ ಇರಿಸುವುದು.
15. ಕಾಮಗಾರಿಯನ್ನು ನಿರ್ವಹಿಸಲು ಅನುಷ್ಠಾನದ ಏಜೆನ್ಸಿಗೆ ವಹಿಸುವ ಮೊದಲು ಲೋಕೋಪಯೋಗಿ ಇಲಾಖೆ ನಿಯಮಾವಳಿಗಳು/ ಮಾರ್ಗಸೂಚಿಯಂತೆ ಅನುಸರಿಸಿರುವ ಬಗ್ಗೆ ಮಾಹಿತಿಯನ್ನು ಸಲ್ಲಿಸುವುದು.
16. KTPP ಅಧಿನಿಯಮ 1999 ಮತ್ತು ನಿಯಮಗಳು 2000 ರನ್ವಯ ಕಾಮಗಾರಿಯನ್ನು ಕೈಗೊಂಡಿರುವ ಬಗ್ಗೆ ದಾಖಲೆಗಳನ್ನು ಸಲ್ಲಿಸುವುದು.
17. ಕಾಮಗಾರಿ ಪ್ರಗತಿಯಲ್ಲಿರುವಾಗ ಸಕ್ಷಮ ಪ್ರಾಧಿಕಾರದ ಹಿರಿಯ ಅಧಿಕಾರಿಗಳು ಪರಿವೀಕ್ಷಣೆ ನಡೆಸಿರುವ ಬಗ್ಗೆ ತಾಂತ್ರಿಕ ಟಿಪ್ಪಣಿ/ ಸಲಹೆ/ಸೂಚನೆ ಟಿಪ್ಪಣಿ ನೀಡಿರುವ ಬಗ್ಗೆ ಮಾಹಿತಿಯನ್ನು ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2025 ದಿನಾಂಕ:24.09.2025ರಲ್ಲಿ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Digitally signed by
MALA S
Date: 28-11-2025
16:58:30

(ಮಾಲಾ ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಆಡಿಟ್-I)/( ಆಡಿಟ್-II)(ಎ&ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿ, ಕೊಪ್ಪಳ ಜಿಲ್ಲೆ, ಕೊಪ್ಪಳ.
4. ಸಂಬಂಧಪಟ್ಟ ಧಾರ್ಮಿಕ ಸಂಸ್ಥೆಗೆ (ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಮುಖಾಂತರ)
5. ಸಂಬಂಧಪಟ್ಟವರಿಗೆ (ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಮುಖಾಂತರ)
6. ಧಾರ್ಮಿಕ ದತ್ತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ, ಭೂಮಿ ಮತ್ತು ಯು.ಪಿ.ಓ.ಆರ್) ಇವರ ಆಪ್ತ ಸಹಾಯಕರು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕು, ಹುಲಿಗಿಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಡತ ಸಂಖ್ಯೆ: HRICE-CNR0CNR1/139/2024-CNREND-HRICE

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಕಡತದಲ್ಲಿನ ಪ್ರಸ್ತಾವನೆಯಲ್ಲಿ, ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲ್ಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನವು ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಡುವ ಪ್ರವರ್ಗ "ಎ" ಅಧಿಸೂಚಿತ ದೇವಸ್ಥಾನವಾಗಿದ್ದು, ಸದರಿ ದೇವಸ್ಥಾನಕ್ಕೆ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಕಾಯ್ದೆಯನ್ನು ದಿನಾಂಕ:01.07.2024 ರಿಂದ ಜಾರಿಗೊಳಿಸಲಾಗಿರುತ್ತದೆ.

ಮುಂದುವರೆದು, ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ಅಧ್ಯಕ್ಷರು, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:06.05.2025ರಂದು ನಡೆದ ಪ್ರಥಮ ಸಭೆಯ ನಡವಳಿಯ ವಿಷಯ:4 ರಲ್ಲಿ ಚರ್ಚಿಸಿ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಪುರುಷರ ಶೌಚಾಲಯ, ಮಹಿಳೆಯರ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಿಂದ ರೂ.340.00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಪಡೆಯಲು ನಿರ್ಣಯಿಸಲಾಗಿರುತ್ತದೆ.

ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಪುರುಷರ ಶೌಚಾಲಯ, ಮಹಿಳೆಯರ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಿಂದ ರೂ.340.00 ಲಕ್ಷಗಳ ಅಂದಾಜು ಪಟ್ಟಿ ತಯಾರಿಸಿದ್ದು, ಸದರಿ ಅಂದಾಜು ಪಟ್ಟಿಯನ್ನು ಅಧೀಕ್ಷಕ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಬಳ್ಳಾರಿ ವೃತ್ತ, ಬಳ್ಳಾರಿ ಹಾಗೂ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ) ಲೋಕೋಪಯೋಗಿ ಇಲಾಖೆ, ಕಲಬುರಗಿ ಇವರು ತಾಂತ್ರಿಕವಾಗಿ ಪರಿಶೀಲಿಸಿರುತ್ತಾರೆ.

ಆದುದರಿಂದ, ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ ಇವರ ಪ್ರಸ್ತಾವನೆಯಂತೆ ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಕಾಮಗಾರಿಗಳಿಗೆ ತಗಲುವ ವೆಚ್ಚವನ್ನು ದೇವಾಲಯದ ನಿಧಿಯಿಂದ ಭರಿಸಲು ಮತ್ತು ಸದರಿ ರೂ.340.00 ಲಕ್ಷಗಳ ಅಂದಾಜು ಪಟ್ಟಿಯಂತೆ ಕಾಮಗಾರಿಗಳಿಗೆ ಷರತ್ತಿಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಕಂಇ 8 ಮುಅಕಾ 2025,**
**ಬೆಂಗಳೂರು, ದಿನಾಂಕ:18.12.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ವ್ಯಾಪ್ತಿಯಲ್ಲಿ ಪುರುಷರ ಶೌಚಾಲಯ, ಮಹಿಳೆಯರ ಶೌಚಾಲಯ



File No. RD/8/MUKA/2025-MUZ-REVENUE DEPATMENT SEC (Computer No. 1885617)
Generated from eOffice by MADEV NARASANNAVAR, RD-MUZ-ASST(MN), ASSISTANT, REVENUE DEPARTMENT SEC on 24/03/2026 03:01 PM

ಹಾಗೂ ಸ್ನಾನ ಗೃಹಗಳನ್ನು ನಿರ್ಮಾಣ ಮಾಡುವ ಕಾಮಗಾರಿಗಳನ್ನು ರೂ.340.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಹಾಗೂ ಸದರಿ ಕಾಮಗಾರಿಗಳಿಗೆ ತಗಲುವ ವೆಚ್ಚವನ್ನು ದೇವಸ್ಥಾನದ ನಿಧಿಯಿಂದ ಭರಿಸುವ ಮತ್ತು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಸ್ಥಳೀಯ ಪ್ರಾಧಿಕಾರದಿಂದ ಕಟ್ಟಡದ Building Plan ವಿನ್ಯಾಸ ಮತ್ತು Layout Planಗೆ ಅನುಮೋದನೆ ಮತ್ತು ನಿರಾಕ್ಷೇಪಣ ಪತ್ರ (NOC) ಪೂರ್ವಾನುಮತಿಯಾಗಿ ಪಡೆದುಕೊಳ್ಳತಕ್ಕದ್ದು.
2. ಧಾರ್ಮಿಕ ದತ್ತಿ ಸಂಸ್ಥೆಗೆ ಸಂಬಂಧಿಸಿದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಪೂರ್ವದಲ್ಲಿ ಉದ್ದೇಶಿತ ಕಾಮಗಾರಿಯ ಸ್ಥಳ/ಜಾಗ ಸರ್ಕಾರದ ಜಮೀನನ್ನು ಒತ್ತುವರಿ ಮಾಡಿ ಕಟ್ಟುವಂತಿಲ್ಲವೆಂಬುದನ್ನು ಹಾಗೂ ಸದರಿ ಜಮೀನಿನ ಮಾಲೀಕತ್ವವನ್ನು ಪಡಿಸಿಕೊಳ್ಳುವುದು (Rights/Ownership of the said land) ಹಾಗೂ ಸಕ್ಷಮ ಪ್ರಾಧಿಕಾರದಿಂದ ಅನುಮೋದಿತವಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
3. For items where Market rate is adopted (Non SR items) Quotations may be called & get approved by the competent authority before taking up the work ( ie., from Superintendent Engineer, PWD/PRED/KRIDL, concerned circles).
4. ಕಾಮಗಾರಿಯ ಬಳಸಲಾದ ಎಲ್ಲಾ ಕಚ್ಚಾ ಸಾಮಾಗ್ರಿಗಳ ಪರೀಕ್ಷೆಗಳನ್ನು, ವಿನ್ಯಾಸ ಮಿಶ್ರಣವನ್ನು ಗುಣಭರವಸೆ ಉಪ ವಿಭಾಗ, ಲೋಕೋಪಯೋಗಿ ಇಲಾಖೆ, (Quality Assurance)ರವರಿಂದ ಪಡೆದು, ಪರೀಕ್ಷೆ ಮಾಡಿಸಿ ವಿಶಿಷ್ಟ ವಿವರಣೆಗೆ ಅನುಗುಣವಾಗಿರುವುದನ್ನು ಖಾತರಿಪಡಿಸಿಕೊಂಡು ಬಳಸುವುದು, ಕಚ್ಚಾ ಸಾಮಾಗ್ರಿಗಳ ಫಲಿತಾಂಶಗಳ ಒಂದು ಪ್ರತಿಯನ್ನು ಕಾರ್ಯನಿರ್ವಹಣಾಧಿಕಾರಿಯವರಿಗೆ ಸಲ್ಲಿಸುವುದು.
5. ಸರ್ಕಾರದಿಂದ ಆಗಿಂದ್ದಾಗ್ಗೆ ಸೂಚಿಸಲಾಗುವ ಸೂಚನೆಗಳನ್ವಯ ಕ್ರಮ ವಹಿಸುವುದು.
6. ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಕಾರ್ಯನಿರ್ವಹಣಾಧಿಕಾರಿಯವರಿಗೆ ನಿಯಮಾನುಸಾರ ಹಸ್ತಾಂತರ ಮಾಡತಕ್ಕದ್ದು.
7. ಮೂಲ ಅಂದಾಜಿನಲ್ಲಿ ಯಾವುದಾದರು ಮಾರ್ಪಾಡುಗಳು, ಹೆಚ್ಚುವರಿ ಅಂಶಗಳು ಮಾಡಬೇಕಾದಲ್ಲಿ ಸಂಹಿತೆ ಪ್ರಕಾರ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡದು ಮುಂದುವರೆಸುವುದು.
8. ಕಾಮಗಾರಿಯನ್ನು KTPP ಅಧಿನಿಯಮದ ಅಡಿಯಲ್ಲಿ ಹಾಗೂ ಸರ್ಕಾರದ ಅಧಿಸೂಚನೆಯಂತೆ ಕಾಮಗಾರಿಯನ್ನು ಅನುಷ್ಠಾನಗೊಳಿಸುವುದು.
9. ಕಾಮಗಾರಿಯನ್ನು ಪರಿಣಿತಿ ಹಾಗೂ ಅನುಭವಸ್ಥ ತಾಂತ್ರಿಕ ಸಿಬ್ಬಂದಿಯ ಮಾರ್ಗದರ್ಶನದಲ್ಲಿ ಕಾರ್ಯಗತಗೊಳಿಸಬೇಕು.
10. ಕಾಮಗಾರಿ ನಿರ್ವಹಣೆಯ ಬಗ್ಗೆ ವಾಚ್ ರಿಜಿಸ್ಟರ್ ಸಲ್ಲಿಸುವುದು.
11. ಸದರಿ ಕಾಮಗಾರಿಯ ಪೂರ್ವದಲ್ಲಿ, ಪ್ರಗತಿಯಲ್ಲಿ ಮತ್ತು ಒಳ ಮತ್ತು ಹೊರ ಭಾಗದಲ್ಲಿ ಛಾಯಾ ಚಿತ್ರಗಳನ್ನು ಪ್ರಸ್ತುತ ಪಡಿಸಬೇಕಿರುತ್ತದೆ.
12. ಕಾಮಗಾರಿಗೆ ಬಳಸಲಾದ ಕಚ್ಚಾ ಸಾಮಾಗ್ರಿಗಳ ಗುಣಮಟ್ಟ ಪರೀಕ್ಷಾ ವರದಿಯನ್ನು ಸಲ್ಲಿಸುವುದು.
13. ಆಡಳಿತಾತ್ಮಕ ಮಂಜೂರಾತಿ ನೀಡಿದ ಅಂದಾಜುಪಟ್ಟಿಯಂತೆ ಕಾಮಗಾರಿಯನ್ನು ನಿರ್ವಯಹಿಸಿದ ಬಗ್ಗೆ ಲೋಕೋಪಯೋಗಿ ಇಲಾಖೆ/ ಪಂಚಾಯತ್ ರಾಜ್ ಇಲಾಖೆ ಯಿಂದ ಚೆಕ್ ಮೆಶರ್ಮೆಂಟ್ ಮಾಡಿಸಿ ಎಂ.ಬಿ. ಪುಸ್ತಕದಲ್ಲಿ ದಾಖಲುಮಾಡಿ ದೃಢೀಕರಣ ಪಡೆಯುವುದು, ಇನ್ನೊಂದು ಪ್ರತಿಯನ್ನು ದೇವಾಲಯದಲ್ಲಿ ಇರಿಸುವುದು.
14. ಕಾಮಗಾರಿಯನ್ನು ನಿರ್ವಹಿಸುಲು ಅನುಷ್ಠಾನದ ಏಜೆನಿಗೆ ವಹಿಸುವ ಮೊದಲು ಲೋಕೋಪಯೋಗಿ ಇಲಾಖೆ ನಿಯಮಾವಳಿಗಳು/ ಮಾರ್ಗಸೂಚಿಯಂತೆ ಅನುಸರಿಸಿರುವ ಬಗ್ಗೆ ಮಾಹಿತಿಯನ್ನು ಸಲ್ಲಿಸುವುದು.
15. KTPP ಅಧಿನಿಯಮ 1999 ಮತ್ತು ನಿಯಮಗಳು 2000 ರನ್ವಯ ಕಾಮಗಾರಿಯನ್ನು ಕೈಗೊಂಡಿರುವ ಬಗ್ಗೆ ದಾಖಲೆಗಳನ್ನು ಸಲ್ಲಿಸುವುದು.



File No. RD/8/MUKA/2025-MUZ-REVENUE DEPATMENT SEC (Computer No. 1885617)

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2025, ದಿನಾಂಕ:24.09.2025ರಲ್ಲಿ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಿದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Digitally signed by
MALA S
Date: 18-12-2025
12:04:57

(ಮಾಲಾ ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಆಡಿಟ್-I)/( ಆಡಿಟ್-II)(ಎ&ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿ, ಕೊಪ್ಪಳ ಜಿಲ್ಲೆ, ಕೊಪ್ಪಳ.
4. ಸಂಬಂಧಪಟ್ಟ ಧಾರ್ಮಿಕ ಸಂಸ್ಥೆಗೆ (ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಮುಖಾಂತರ)
5. ಸಂಬಂಧಪಟ್ಟವರಿಗೆ (ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಮುಖಾಂತರ)
6. ಧಾರ್ಮಿಕ ದತ್ತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ, ಭೂಮಿ ಮತ್ತು ಯು.ಪಿ.ಓ.ಆರ್) ಇವರ ಆಪ್ತ ಸಹಾಯಕರು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.



File No. RD/8/MUKA/2025-MUZ-REVENUE DEPATMENT SEC (Computer No. 1885617)